# Akashvani : Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 25.06.2024 / 18.40 hrs

ಮುಖ್ಯಾಂಶಗಳು

೧. ಡೆಂಘಿ ಪ್ರಕರಣ ನಿಯಂತ್ರಿಸಲು ಆರೋಗ್ಯ ಇಲಾಖೆ ಸಜ್ಜು -ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಕಾವೇರಿ ನದಿ ಮಾಲಿನ್ಯ ನಿಯಂತ್ರಣಕ್ಕೆ ಅಗತ್ಯ ಕ್ರಮ - ಉಪಮುಖ್ಯಮಂತ್ರಿ ಆದೇಶ

೩. ವಿಜಯಪುರ-ಧಾರವಾಡದ ಫುಡ್ ಪಾರ್ಕ್‌ಗಳಲ್ಲಿ ಜಪಾನ್ ಕಂಪನಿಗಳ ಪಾಲುದಾರಿಕೆ

೪. ಹಾಲಿನ ದರ ಏರಿಕೆ: ಸರ್ಕಾರದ ತೀರ್ಮಾನಕ್ಕೆ ಬಿಜೆಪಿ ವಿರೋಧ

**<><*<><>*><>**

ರಾಜ್ಯದಲ್ಲಿ ಈವರೆಗೆ ೫ ಸಾವಿರದ ೩೭೪ ಡೆಂಘಿ ಪ್ರಕರಣಗಳು ವರದಿಯಾಗಿದ್ದು, ೫ ಮಂದಿ ಮೃತಪಟ್ಟಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ಆರೋಗ್ಯ ಸಚಿವರು ಹಾಗೂ ಹಿರಿಯ ಅಧಿಕಾರಿಗಳ ಉನ್ನತ ಮಟ್ಟದ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿಕ್ಕಮಗಳೂರು, ಮೈಸೂರು, ಹಾವೇರಿ, ಶಿವಮೊಗ್ಗ, ಚಿತ್ರದುರ್ಗ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಕರಣಗಳು ಹಾಗೂ ಬಿಬಿಎಂಪಿ ವ್ಯಾಪ್ತಿಯಲ್ಲಿ ೧ ಸಾವಿರದ ೨೩೦ ಪ್ರಕರಣಗಳು ವರದಿಯಾಗಿವೆ. ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಚಿಕಿತ್ಸಾ ಸೌಲಭ್ಯ ಮತ್ತು ಔಷಧಿ ಲಭ್ಯವಿರುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

**<><*<><>*><>**

ಡಿಸೆಂಬರ್ ೨೦ ರಿಂದ ಮಂಡ್ಯದಲ್ಲಿ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಸಲು ತೀರ್ಮಾನಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿಸೆಂಬರ್ ೨೦, ೨೧, ೨೨ ರಂದು ಒಟ್ಟು ಮೂರು ದಿನ ಮಂಡ್ಯದಲ್ಲಿ ಸಾಹಿತ್ಯ ಸಮ್ಮೇಳನ ನಡೆಸಲು ಇಂದಿನ ಪೂರ್ವಭಾವಿಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದರು.

ಈ ಸಮ್ಮೇಳನದಲ್ಲಿ ರಾಜ್ಯ, ಹೊರರಾಜ್ಯ, ವಿದೇಶಿ ಕನ್ನಡಿಗರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ. ಸಮ್ಮೇಳನವನ್ನು ಯಶಸ್ವಿಯಾಗಿ ನಡೆಸಲು ಜಿಲ್ಲಾಡಳಿತ, ಸಾಹಿತ್ಯ ಪರಿಷತ್‌ಗೆ ಎಲ್ಲ ರೀತಿಯ ಸಹಕಾರ ನೀಡಲಾಗುವುದು. ಹಾಲಿನದರ ಹೆಚ್ಚಳ ಕುರಿತು ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯಗಳ ದರಕ್ಕೆ ಅನುಗುಣವಾಗಿ ಕೆಎಂಎಫ್ ತೀರ್ಮಾನ ತೆಗೆದುಕೊಳ್ಳುತ್ತದೆ ಎಂದು ಹೇಳಿದರು.

**<><*<><>*><>**

ಕಾವೇರಿ ನದಿ ಮಾಲಿನ್ಯ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಎಂ.ಬಿ. ಪಾಟೀಲ್ ಮತ್ತು ಈಶ್ವರ ಖಂಡ್ರೆ ಸಕಾರಾತ್ಮಕ ಸ್ಪಂದನೆ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಶಾಸಕ ದಿನೇಶ್ ಗೂಳಿ ಗೌಡ ಮನವಿಗೆ ಸ್ಪಂದಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಾವೇರಿ ನದಿ ಮಾಲಿನ್ಯದ ಬಗ್ಗೆ ವರದಿ ನೀಡುವಂತೆ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಆದೇಶ ಮಾಡಿದ್ದಾರೆ ಎಂದು ಅವರು ತಿಳಿಸಿದರು. ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಮಾತನಾಡಿ, ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ್ದು, ಸಂಬಂಧಿಸಿದ ಇಲಾಖೆಗಳ ಸಹಯೋಗದಲ್ಲಿ ಸಮಿತಿ ರಚಿಸಿ ೨ ವಾರದಲ್ಲಿ ವರದಿ ಸಲ್ಲಿಸಲು ಅರಣ್ಯ ಮತ್ತು ಪರಿಸರ ಇಲಾಖೆ ಪ್ರಧಾನ ಕಾರ್ಯದರ್ಶಿ ಅವರಿಗೆ ಸೂಚಿಸಲಾಗಿದೆ ಎಂದರು.

**<><*<><>*><>**

ಅಭಿವೃದ್ಧಿ ಕಾಮಗಾರಿಗಳಿಗೆ ಮೀಸಲಾದ ಸರ್ಕಾರದ ಅನುದಾನವನ್ನು ಸಕಾಲದಲ್ಲಿ ಬಳಸದೇ ಹೋದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ಹೊಣೆ ಮಾಡುವುದಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ.

ಧಾರವಾಡದಲ್ಲಿಂದು ಜರುಗಿದ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ನಿಗದಿತ ಅವಧಿಯಲ್ಲಿ ಕ್ರೀಯಾ ಯೋಜನೆ ರೂಪಿಸಿ ಸರ್ಕಾರದ ಯೋಜನೆಗಳು ಜನರಿಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

**<><*<><>*><>**

ಕೇಂದ್ರದ ಮೂರು ಹೊಸ ಕ್ರಿಮಿನಲ್ ಕಾನೂನುಗಳು ಜುಲೈ ೧ ರಿಂದ ಜಾರಿಗೆ ಬರಲಿದ್ದು, ಸಂತ್ರಸ್ತರ ಮತ್ತು ನ್ಯಾಯಪರ ಕಾನೂನು ಇವಾಗಿವೆ ಎಂದು ಕರ್ನಾಟಕ ಸರ್ಕಾರದ ಸಾರ್ವಜನಿಕ ಅಭಿಯೋಜಕರಾದ ಶೈಲಜ ಕೃಷ್ಣಾ ನಾಯಕ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಕೇಂದ್ರ ವಾರ್ತಾ ಶಾಖೆ - ಪಿಐಬಿ ಏರ್ಪಡಿಸಿದ್ದ ವಾರ್ತಾಲಾಪ್ ಮಾಧ್ಯಮ ಸಂವಾದ ಕಾರ್ಯಕ್ರಮದಲ್ಲಿ ಅವರು, ಈ ವಿಷಯ ತಿಳಿಸಿದರು. ಭಾರತೀಯ ನಾಗರಿಕ ಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, ಭಾರತೀಯ ಸಾಕ್ಷಾ ಅಧಿನಿಯಮ ಜಾರಿಗೆ ಬಂದ ನಂತರ ನ್ಯಾಯ ಪ್ರಕ್ರಿಯೆ ಚುರುಕುಗೊಂಡು ತಂತ್ರಜ್ಞಾನದ ಬಳಕೆಗೆ ಹೆಚ್ಚಿನ ಅವಕಾಶ ದೊರೆಯಲಿದೆ ಎಂದರು. ಹೊಸ ಕ್ರಿಮಿನಲ್ ಕಾಯ್ದೆಯಿಂದ ಅತ್ಯಾಚಾರಕ್ಕೆ ಒಳಗಾದ ಮಹಿಳೆಯ ವಿಚಾರಣೆಯನ್ನು ಮನೆಯಲ್ಲೇ ನಡೆಸುವ ಅವಕಾಶ ದೊರೆತಿರುವುದರಿಂದ ಸಂತ್ರಸ್ತರು ನ್ಯಾಯಾಲಯಕ್ಕೆ ಬಂದು ವಿಚಾರಣೆ ಎದುರಿಸಲು ಆಗುತ್ತಿದ್ದ ಮುಜುಗರ ತಪ್ಪಲಿದೆ ಎಂದು ಅವರು ಅಭಿಪ್ರಾಯಪಟ್ಟರು. ನಿಯಮ ೧೮೪ರ ಅಡಿ ಅತ್ಯಾಚಾರಕ್ಕೆ ಒಳಗಾದ ಮಹಿಳೆಯ ಹೇಳಿಕೆಯನ್ನು ಮಹಿಳಾ ನ್ಯಾಯಿಕ ಅಧಿಕಾರಿಗಳ ಸಮ್ಮುಖದಲ್ಲೇ ನಡೆಸುವುದು ಕಡ್ಡಾಯವಾಗಲಿದೆ. ಜಿರೊ-ಎಫ್ಐಆರ್ ಎಂಬ ಹೊಸ ವ್ಯವಸ್ಥೆ ಕಲ್ಪಿಸಿ ಇ-ಮೇಲ್ ಅಥವಾ ಯಾವುದೇ ಎಲೆಕ್ಟ್ರಾನಿಕ್ ಸಂಪರ್ಕದ ಮೂಲಕ ದೂರನ್ನು ಸ್ವೀಕರಿಸಿ ಜಿರೊ-ಎಫ್ಐಆರ್‌ನ್ನು ಪೊಲೀಸರು ದಾಖಲಿಸಲು ಅವಕಾಶ ನೀಡಲಾಗಿದೆ. ಸಂತ್ರಸ್ತರ ವೈದ್ಯಕೀಯ ತಪಾಸಣೆಯನ್ನು ೭ ದಿನಗಳಲ್ಲಿ ಪೂರ್ಣಗೊಳಿಸಬೇಕು. ೧೪ ದಿನಗಳಲ್ಲಿ ಪ್ರಾಥಮಿಕ ವರದಿ ಸಲ್ಲಿಕೆ ಕಡ್ಡಾಯವಾಗಲಿದೆ. ೯೦ ದಿನಗಳಲ್ಲಿ ವಿಚಾರಣೆ ಪೂರ್ಣಗೊಳ್ಳಬೇಕು. ೩ ವರ್ಷದಲ್ಲಿ ತಪ್ಪಿತಸ್ಥರಿಗೆ ಶಿಕ್ಷೆಯಾಗುವುದನ್ನು ಹೊಸ ಕಾಯ್ದೆಯಲ್ಲಿ ಕಡ್ಡಾಯಗೊಳಿಸಲಾಗಿದೆ ಎಂದರು. ಅತ್ಯಾಚಾರಕ್ಕೆ ಒಳಗಾದ ಮಹಿಳೆಯರಿಗೆ ಆಸ್ಪತ್ರೆಗಳಲ್ಲಿ ತಕ್ಷಣ ಚಿಕಿತ್ಸೆ ನೀಡಬೇಕು, ಇಲ್ಲದೆ ಇದ್ದಲ್ಲಿ ವೈದ್ಯರಿಕೆ ಶಿಕ್ಷೆ ನೀಡುವ ಅವಕಾಶ ಕಲ್ಪಿಸಲಾಗಿದೆ. ಅಪರಾಧಿ ಗಳಿಸಿದ ಸ್ವತ್ತನ್ನು ವಶಪಡಿಸಿಕೊಂಡು ಸಂತ್ರಸ್ತರಿಗೆ ನೀಡುವ ಅವಕಾಶ ಹೊಸ ಕಾಯ್ದೆಯಲ್ಲಿದೆ ಎಂದರು. ಜಿಲ್ಲಾ ಸತ್ರ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ವೆಂಕಟ ಸುದರ್ಶನ್ ಮಾತನಾಡಿ, ಹೊಸ ಕಾನೂನು ಸಿಆರ್‌ಪಿಸಿ, ಐಪಿಸಿಯಲ್ಲಿ ಕಂಡು ಬಂದಿದ್ದ ಕೆಲವು ನ್ಯೂನತೆಗಳನ್ನು ನಿವಾರಿಸಿ ಹೊಸ ಅಧಿಸೂಚನೆಗಳನ್ನು ಪರಿಚಯಿಸಲಾಗಿದೆ ಎಂದರು. ವಾರ್ತಾ ಶಾಖೆಯ ಹೆಚ್ಚುವರಿ ಮಹಾನಿರ್ದೇಶಕ ಎಸ್.ಜಿ. ರವೀಂದ್ರ ಮೊದಲಾದವರು ಹಾಜರಿದ್ದರು.

**<><*<><>*><>**

ಯುವಜನಾಂಗ ಮಾದಕ ವಸ್ತುಗಳ ಸೇವನೆಯಿಂದ ದೂರವಿರಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣಗೌಡ ಹೇಳಿದ್ದಾರೆ. ಮಂಡ್ಯದಲ್ಲಿ ಸಬಲೀಕರಣ ಇಲಾಖೆ ವತಿಯಿಂದ ಏರ್ಪಡಿಸಿದ್ದ ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಈ ವಿಷಯ ತಿಳಿಸಿದರು.

**<><*<><>*><>**

ರಾಜ್ಯದಲ್ಲಿ ಬಂಡವಾಳ ತೊಡಗಿಸಲು ಜಪಾನ್ ಕಂಪನಿಗಳು ಆಸಕ್ತಿ ವಹಿಸಿವೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಟೊಕಿಯೋದಲ್ಲಿ ನಡೆದ ಸಭೆಯಲ್ಲಿ ಅವರು ಈ ವಿಷಯ ತಿಳಿಸಿದ್ದಾರೆ. ತಂತ್ರಜ್ಞಾನ, ಆವಿಷ್ಕಾರ, ಅಭಿವೃದ್ಧಿ ಪಾಲುದಾರಿಕೆಗೆ ಜಪಾನಿನ ಹಿಟಾಚಿ ಕಂಪನಿ ಆಸಕ್ತಿ ವಹಿಸಿದೆ. ಅದೇ ರೀತಿ ರಾಜ್ಯದಲ್ಲಿ ವಹಿವಾಟು ವಿಸ್ತರಣೆಗೆ ನಿಸಾನ್ ಫುಡ್ ಕಂಪನಿಯೊಂದಿಗೆ ಮಹತ್ವದ ಸಮಾಲೋಚನೆ ನಡೆಸಲಾಗಿದೆ ಎಂದರು. ವಿಜಯಪುರ ಧಾರಾವಾಡ ಜಿಲ್ಲೆಗಳಲ್ಲಿನ ಫುಡ್‌ಪಾರ್ಕ್ ಪಾಲುದಾರಿಕೆಗೆ ಜಪಾನ್‌ನ ನಿಸಾನ್ ಕಂಪನಿ ಬೆಂಬಲ ಸಹಕಾರ ನೀಡುವುದಾಗಿ ಭರವಸೆ ನೀಡಿದೆ ಎಂದರು. ರಾಜ್ಯದ ಉನ್ನತ ಮಟ್ಟದ ನಿಯೋಗ ಜಪಾನ್ ಕಂಪನಿಯ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದೆ. ಈ ನಿಯೋಗದಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಎಸ್. ಸೆಲ್ವಕುಮಾರ್ ಹಾಗೂ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಆಯುಕ್ತರಾದ ಗುಂಜನ್ ಕೃಷ್ಣ ಮೊದಲಾದವರು ಹಾಜರಿದ್ದರು.

**<><*<><>*><>**

ಕೆಎಂಎಫ್ ಹಾಲಿನ ದರ ಹೆಚ್ಚಳ ಮಾಡಿದ್ದು ಹೊಸ ದರಗಳು ನಾಳೆಯಿಂದಲೇ ಜಾರಿಗೆ ಬರಲಿದೆ ಎಂದು ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಈ ವಿಷಯ ತಿಳಿಸಿದ ಅವರು, ಬೇರೆ

ರಾಜ್ಯಗಳಿಗೆ ಹೋಲಿಸಿದರೆ ರಾಜ್ಯದಲ್ಲಿ ಹಾಲಿನ ದರ ಕಡಿಮೆ ಇದೆ ಎಂದು ಹೇಳಿದರು. ರಾಜ್ಯದಲ್ಲಿ ೯೮ ಲಕ್ಷದ ೮೭ ಸಾವಿರ ಲೀಟರ್ ಹಾಲು ಶೇಖರಣೆ ಮಾಡಲಾಗುತ್ತಿದೆ. ೫೦ ಮಿಲಿ ಲೀಟರ್ ಹಾಲು ಹೆಚ್ಚಿಗೆ ಪೂರೈಸುತ್ತಿರುವುದರಿಂದ ಗ್ರಾಹಕರಿಗೆ ಯಾವುದೇ ಹೊರೆಯಾಗದು, ಮೊಸರು ಇನ್ನಿತರೆ ಹಾಲಿನ ಉತ್ಪನ್ನ ದರದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಈ ನಡುವೆ ಬೆಳಗಾವಿಯಲ್ಲಿ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ ಮಾತನಾಡಿ, ಸರ್ಕಾರ ಅರೆ ವೈಜ್ಞಾನಿಕ ಮತ್ತು ಉಚಿತ ಯೋಜನೆಗಳನ್ನು ಜಾರಿಗೊಳಿಸಿ ಜನರ ಬದುಕನ್ನು ಸಂಕಷ್ಟಕ್ಕೆ ದೂಡುತ್ತಿದೆ. ಬಡವರ ಬಗ್ಗೆ ನಿಜವಾದ ಕಾಳಜಿ -ಕಳಕಳಿ ಇದ್ದರೆ ಕೂಡಲೇ ಹಾಲಿನ ದರ ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ. ಬಿಜೆಪಿ ಮುಖಂಡ ಡಾ. ಸಿ.ಎನ್. ಅಶ್ವತ್ಥ ನಾರಾಯಣ ಪ್ರತಿಕ್ರಿಯಿಸಿ, ಬೆಲೆ ಏರಿಕೆ ಮತ್ತು ಹಣದುಬ್ಬರದ ಗ್ಯಾರಂಟಿಯನ್ನು ಕಾಂಗ್ರೆಸ್ ಸರ್ಕಾರ ನೀಡುತ್ತಿದೆ. ಹೈನುಗಾರರಿಗೆ ಹಾಲಿನ ಸಬ್ಸಿಡಿ ನೀಡಿಲ್ಲ. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ನೀಡಬೇಕಾದ ರಾಜ್ಯದ ಪಾಲಿನ ಹಣವನ್ನು ನೀಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ಹಾವೇರಿ ತಾಲೂಕಿನ ವಿವಿಧ ಭಾಗಗಳಲ್ಲಿ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ವಿಧಾನಸಭೆಯ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ ಹಾವೇರಿಯಲ್ಲಿಂದು ಹೇಳಿದ್ದಾರೆ.

೨. ವಿದ್ಯಾರ್ಥಿಗಳಲ್ಲಿ ಶಿಸ್ತು ಸಂಯಮ ಹಾಗೂ ನಾಯಕತ್ವದ ಗುಣ ರೂಪಿಸಲು ಶಿಕ್ಷಕರು ಶ್ರಮಿಸಬೇಕು ಎಂದು ಭಾರತ್ ಸ್ಕೌಟ್ಸ್ ಮತ್ತು ಗೌಡ್ಸ್ ಸಂಸ್ಥೆಯ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಮಡಿಕೇರಿಯಲ್ಲಿಂದು ಹೇಳಿದ್ದಾರೆ.

೩. ಆಡಳಿತದಲ್ಲಿ ಪಾರದರ್ಶಕತೆ, ಕಡಿಮೆ ಖರ್ಚಿನಲ್ಲಿ ನಾಗರಿಕ ಸೌಲಭ್ಯ ಒದಗಿಸುವ ಏಳು ವರದಿಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ. ದೇಶಪಾಂಡೆ ಹೇಳಿದ್ದಾರೆ.

೪. ಅಂಗನವಾಡಿ ಕೇಂದ್ರಗಳಿಗೆ ಗುಣಮಟ್ಟದ ಆಹಾರ ಪೂರೈಸಬೇಕೆಂದು ವಿಧಾನಪರಿಷತ್ ಸದಸ್ಯ ಎಂ.ಎಲ್.ಸುನೀಲ್ ಕುಮಾರ್ ಕೋಲಾರದಲ್ಲಿಂದು ಹೇಳಿದ್ದಾರೆ.

೫. ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಮಿಣಜೇನಹಳ್ಳಿಯಲ್ಲಿ ಕಲುಷಿತ ನೀರು ಸೇವನೆಯಿಂದ ಓರ್ವ ವ್ಯಕ್ತಿ ಮೃತಪಟ್ಟಿದ್ದು, ಇತರೆ ೬ ಮಂದಿ ಅಸ್ವಸ್ಥರಾಗಿದ್ದಾರೆ.

**<><*<><>*><>**

ವಿಧಾನಪರಿಷತ್ ಸದಸ್ಯ ಜಗದೀಶ್ ಶೆಟ್ಟರ್ ಅವರ ರಾಜೀನಾಮೆಯಿಂದ ತೆರವಾಗಿರುವ ಸ್ಥಾನವನ್ನು ತುಂಬಲು ವಿಧಾನಪರಿಷತ್‌ಗೆ ಮುಂದಿನ ತಿಂಗಳ ೧೨ರಂದು ಚುನಾವಣೆ ನಡೆಸಲು ಕೇಂದ್ರ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದೆ. ಇಂದು ಅಧಿಸೂಚನೆ ಪ್ರಕಟವಾಗಲಿದ್ದು, ನಾಮಪತ್ರ ಸಲ್ಲಿಸಲು ಜುಲೈ ೨ ಕೊನೆಯ ದಿನವಾಗಿದೆ. ೩ ರಂದು ನಾಮಪತ್ರ ಪರಿಶೀಲನಾ ಕಾರ್ಯ ನಡೆಯಲಿದ್ದು, ಜುಲೈ ೫ ರಂದು ಉಮೇದುವಾರಿಕೆ ಹಿಂಪಡೆಯಲು ಕಡೆಯ ದಿನವಾಗಿದೆ.

**<><*<><>*><>**

ರಾಯಚೂರು ಜಿಲ್ಲೆಯಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣಕ್ಕಾಗಿ ೧೦ ಎಕರೆ ಜಾಗವನ್ನು ಮೀಸಲಿಡಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್. ಭೋಸರಾಜು ಹೇಳಿದ್ದಾರೆ.